(4)

ಕರ್ನಾಟಕ ಸರ್ಕಾರ

ಸಮಗ್ರ ಮಕ್ಕಳ ರಕ್ಷಣಾ ಯೋಜನೆ,

C/o ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು–560001, ಕರ್ನಾಟಕ

E-mail ID:icpc.kar@gmail.com Phone No: 080-22879381

ಸಂಖ್ಯೆ: ಕೆಎಸ್ಐಸಿಪಿಎಸ್/TCH/03/2020-21 ದಿನಾಂಕ:08–07–2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
ಎಲ್ಲಾ ಜಿಲ್ಲೆಗಳು

ಮಾನ್ಯರೇ,

ವಿಷಯ: ಮಕ್ಕಳ "ಟೆಲಿ-ಕೌನ್ಸಲಿಂಗ್" ಟೋಲ್ ಫ್ರೀ ಸಂಖ್ಯೆ:18004252244 ಕುರಿತು ಉಚಿತ ಪತ್ರಿಕಾ ಪ್ರಕಟಣೆ ನೀಡಲು ಕ್ರಮವಹಿಸುವ ಬಗ್ಗೆ.

********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ನಿರ್ಲಕ್ಷತೆಗೊಳಗಾದ, ಪರಿತ್ಯಜಿಸಲ್ಪಟ್ಟ, ದೌರ್ಜನ್ಯಕ್ಕೆ ಒಳಗಾದ, ಶೋಷಣೆಗೆ ಒಳಗಾದ ಮತ್ತು ಕುಟುಂಬದಿಂದ ಬೇರ್ಪಟ್ಟ ಮಕ್ಕಳು ದುರ್ಬಲ ಸ್ಥಿತಿಗೆ ತಲುಪದಿರುವಂತೆ ತಡೆಯಲು ಹಾಗೂ ಇಂತಹ ಪ್ರಕರಣಗಳನ್ನು ಕಡಿಮೆ ಮಾಡಲು ಮತ್ತು ಸಂಕಷ್ಟದಲ್ಲಿರುವ ಮಕ್ಕಳ ಪರಿಸ್ಥಿತಿಯನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿರುವ ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ.

ಕರ್ನಾಟಕದಲ್ಲಿ ಆಪ್ತ-ಸಮಾಲೋಚನೆ ಅಗತ್ಯವಿರುವ ಎಲ್ಲಾ ಮಕ್ಕಳಿಗಾಗಿ "ಟೆಲಿ-ಕೌನ್ಸಲಿಂಗ್" ಸೌಲಭ್ಯವನ್ನು ನೀಡಲು ಯೋಜಿಸಲಾಗಿದೆ. ಆಪ್ತ ಸಮಾಲೋಚನೆ ಬಯಸುವ ಕರ್ನಾಟಕದಲ್ಲಿನ ಎಲ್ಲಾ ಮಕ್ಕಳು ಹಾಗೂ ಮಕ್ಕಳ ಪೋಷಕರು ಸಹ 18004252244 ಸಂಖ್ಯೆಗೆ ಕರೆ ಮಾಡುವ ಮೂಲಕ ಉಚಿತವಾಗಿ ಆಪ್ತ ಸಮಾಲೋಚನೆ ಸೌಲಭ್ಯ ಪಡೆಯಬಹುದಾಗಿದ್ದು, ಈ ಕುರಿತು ಮಕ್ಕಳಿಗೆ/ಸಾರ್ವಜನಿಕರಿಗೆ ಹೆಚ್ಚಿನ ಪ್ರಚಾರ ನೀಡುವುದು ಅತ್ಯಾವಶ್ಯಕವಾಗಿರುವುದರಿಂದ ತಮ್ಮ ಜಿಲ್ಲೆಗಳಲ್ಲಿನ ಕನ್ನಡ ಹಾಗೂ ಆಂಗ್ಲ ಭಾಷಾ ಪತ್ರಿಕೆಗಳಲ್ಲಿ ಉಚಿತವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಲು ಕ್ರಮ ಕೈಗೊಳ್ಳಲು ಕೋರಲಾಗಿದೆ. (ಪತ್ರಿಕೆಗಳಲ್ಲಿ ನೀಡಬೇಕಾದ ಜಾಹಿರಾತು ವಿವರ ಕನ್ನಡ ಮತ್ತು ಆಂಗ್ಲ ಪ್ರತಿ ಲಗತ್ತಿಸಿದೆ).

ತಮ್ಮ ವಿಶ್ವಾಸಿ,

13.07.2020

ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

Scanned with CamScanner